# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 432
2. ಸದಸ್ಯರ ಹೆಸರು : ಶ್ರೀ ಎಂ. ನಾಗರಾಜು
3. ಉತ್ತರಿಸಬೇಕಾದ ದಿನಾಂಕ : 15.02.2024
4. ಉತ್ತರಿಸಬೇಕಾದ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಮೇಕೆದಾಟು ಯೋಜನೆ ಅಡಿಯಲ್ಲಿ 67 ಟಿ.ಎಂ.ಸಿ ನೀರನ್ನು ಸಂಗ್ರಹಿಸಿ ಬೆಂಗಳುರು ನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಿಗೆ ಕುಡಿಯುವ ನೀರು ಪೂರೈಸಲು ವಿಸ್ತøತ ಯೋಜನಾ ವರದಿಯನ್ನು 2019ರಲ್ಲಿ ಕೇಂದ್ರ ಜಲ ಆಯೋಗಕ್ಕೆ ಸಲ್ಲಿಸಲಾಗಿದ್ದು, ಈ ಯೋಜನೆ ಯಾವ ಹಂತದಲ್ಲಿದೆ ಮತ್ತು ಕೇಂದ್ರ ಸರ್ಕಾರದಿಂದ ಅನುಮತಿ ದೊರಕಿದೆಯೇ; | • ಮೇಕೆದಾಟು ಸಮತೋಲನಾ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯ ರೂ.9000.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಯನ್ನು ದಿನಾಂಕ:18.01.2019 ರಂದು ಕೇಂದ್ರ ಜಲ ಆಯೋಗಕ್ಕೆ ಅನುಮೋದನೆಗೆ ಸಲ್ಲಿಸಲಾಗಿದ್ದು, ಕೇಂದ್ರ ಜಲ ಆಯೋಗದ ವಿವಿಧ ನಿರ್ದೇಶನಾಲಯಗಳಲ್ಲಿ ಪರಿಶೀಲನೆಯಲ್ಲಿರುತ್ತದೆ.<br>• ಯೋಜನೆಗೆ ಅವಶ್ಯವಿರುವ Environmental Impact Assessment & Environmental Management Plan ವರದಿಗಳನ್ನು ತಯಾರಿಸಲು Terms of Reference ಅರ್ಜಿಯನ್ನು ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆಯ ಸಚಿವಾಲಯಕ್ಕೆ (MoEF & CC) ಈ ಹಿಂದೆ ಸಲ್ಲಿಸಲಾದ ಅರ್ಜಿಯು Delist ಮಾಡಲಾಗಿದ್ದು, ಅರ್ಜಿಯನ್ನು ಮರುಸಲ್ಲಿಸಲು ಕ್ರಮ ವಹಿಸಲಾಗುತ್ತಿದೆ.<br>• ಸದರಿ ಯೋಜನೆಗೆ ಅವಶ್ಯವಿರುವ ಅರಣ್ಯ ಭೂಮಿಗಯ ಬದಲಾಗಿ ಅರಣ್ಯ ಇಲಾಖೆಗೆ ಹಸ್ತಾಂತರಿಸುವ compensatory afforestation land ಅನ್ನು ಮಂಡ್ಯ, ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಗುರುತಿಸಲಾಗಿದೆ.<br>• ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, FRL ಗಡಿರೇಖೆ ಗುರುತಿಸುವಿಕೆ ಮತ್ತು ಮರಗಳ ಏಣಿಕೆ ಕಾರ್ಯಗಳಿಗೆ ಅನುಮೋದನೆ ನೀಡಿದ್ದು, ಪ್ರಸ್ತುತ 355.00 ಕಿ.ಮೀ ನಷ್ಟು FRL ಗಡಿರೇಖೆ ಗುರುತಿಸುವಿಕೆ ಕಾಮಗಾರಿ ಪೂರ್ಣಗೊಂಡಿದ್ದು, ಉಳಿಕೆ ಕಾಮಗಾರಿ ಪ್ರಗತಿಯಲ್ಲಿದೆ. |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| | | • ದಿನಾಂಕ:02.02.2024ರಂದು ಜರುಗಿದ CWMA 28ನೇ ಸಭೆಯಲ್ಲಿ Chairman, CWMA ರವರು ಯೋಜನೆಯ ಕಾರ್ಯಸಾಧ್ಯತೆಯನ್ನು ತಾಂತ್ರಿಕ/ಆರ್ಥಿಕ ಅಂಶಗಳನ್ವಯ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳುವಂತೆ ಕೇಂದ್ರ ಜಲ ಆಯೋಗಕ್ಕೆ ಹಿಂದಿರುಗಿಸುವ ನಿರ್ಣಯವನ್ನು ಮಾಡಿರುತ್ತಾರೆ.<br>• ಸದರಿ ಯೋಜನೆಗೆ ಇರುವ ಕಾನೂನಾತ್ಮಕ ಹಾಗೂ ಅಡಳಿತಾತ್ಮಕ ತೊಡಕುಗಳನ್ನು ನಿವಾರಿಸಿಕೊಂಡು ಸಕ್ಷಮ ಪ್ರಾಧಿಕಾರಗಳ ತೀರುವಳಿಗಳೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯ ಕ್ರಮಗಳನ್ನು ವಹಿಸಲಾಗುತ್ತಿದೆ. |
| (ಆ) | ಕೃಷ್ಣಾ ಮೇಲ್ದಂಡೆ ಯೋಜನೆಯಡಿ ರಾಜ್ಯಕ್ಕೆ 173 ಟಿ.ಎಂ.ಸಿ ನೀರು ಬಳಕೆಗೆ ಕೃಷ್ಣಾ ನೀರು ವಿವಾದ ನ್ಯಾಯಾಧೀಕರಣ-2 2010ರಲ್ಲಿ ತೀರ್ಪು ಪ್ರಕಟಿಸಿದ್ದು, 16900 ಕೋಟಿ ಮೊತ್ತದ ಈ ಯೋಜನೆಗೆ ದಶಕ ಕಳೆದರೂ ರಾಜ್ಯ ಪತ್ರದಲ್ಲಿ ಪ್ರಕಟಿಸದಿರಲು ಕಾರಣಗಳೇನು; | • ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನನ್ವಯ ರಾಜ್ಯಕ್ಕೆ 173 ಟಿ.ಎಂ.ಸಿ ನೀರಿನ ಹಂಚಿಕೆಯಾಗಿದ್ದು ಈ ಪೈಕಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಯೋಜನೆ 130 ಟಿ.ಎಂ.ಸಿ ನೀರಿನ ಹಂಚಿಕೆಯಾಗಿರುತ್ತದೆ.<br>• ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ಹಾಗೂ ಮುಂದುವರೆದ ತೀರ್ಪಿನ ಕುರಿತಾಗಿ ಕಣಿವೆ ರಾಜ್ಯಗಳು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಿಸಿರುವ SLP & IA ಗಳು ಇತ್ಯರ್ಥಕ್ಕೆ ಬಾಕಿ ಇರುತ್ತವೆ.<br>• ಇದಲ್ಲದೇ, ದಿನಾಂಕ:16.09.2011ರ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪನ್ನು ಗೆಜಟ್ ಪ್ರಕಟಣೆ ಮಾಡದಂತೆ ಕೇಂದ್ರ ಸರ್ಕಾರಕ್ಕೆ ಆದೇಶಿಸಲಾಗಿದೆ.<br>• ಮುಂದುವರೆದು, ಆಂಧ್ರಪ್ರದೇಶ ಮರುಸಂಘಟನೆ ಕಾಯ್ದೆ-2014 ರನ್ವಯ ರಚಿತವಾಗಿರುವ ತೆಲಂಗಾಣ ಮತ್ತು ಆಂಧ್ರಪ್ರದೇಶ ರಾಜ್ಯಗಳಿಗೆ ಕೃಷ್ಣಾ ನ್ಯಾಯಾಧೀಕರಣ-2 ರಿಂದ ಈ ಹಿಂದಿನ ಆಂಧ್ರಪ್ರದೇಶಕ್ಕೆ ಹಂಚಿಕೆಯಾಗಿರುವ ನೀರಿನ ಮರು ಹಂಚಿಕೆಯ ವಿಷಯವು ಕೃಷ್ಣಾ ನ್ಯಾಯಾಧೀಕರಣದ ಮುಂದೆ ಇತ್ಯರ್ಥವಾಗಬೇಕಿದೆ. |

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಇ) | ಭದ್ರಾ ಮೇಲ್ದಂಡೆ ಯೋಜನೆಯಿಂದ ಚಿಕ್ಕಮಗಳೂರು ಚಿತ್ರದುರ್ಗ ತುಮಕೂರು ಮತ್ತು ದಾವಣಗೆರೆ ಜಿಲ್ಲೆಯ 2.25.525 ಹೆಕ್ಟೇರ್ ಭೂಮಿಗೆ ನೀರಾವರಿ ಸೌಲಭ್ಯ ಒದಗಲಿದ್ದು, 2023-24ರ ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಈ ಯೋಜನೆಹೆ ಅನುದಾನ ಸಹ ಮಂಜೂರಾಗಿದ್ದು, ಈವರೆವಿಗೂ ಯೋಜನೆ ಅನುಷ್ಠಾನವಾಗದಿರಲು ಕಾರಣೆಗಳೇನು ಹಾಗೂ ಕೇಂದ್ರದಿಂದ ಈ ಯೋಜನೆಗೆ ಒದಗಿಸಿರುವ ಅನುದಾನದ ಮೊತ್ತದ ವಿವರ ನೀಡುವುದು? | • ಭದ್ರಾ ಮೇಲ್ದಂಡೆ ಯೋಜನೆಯು ಈವರೆವಿಗೂ ಅನುಷ್ಠಾನವಾಗದಿರುವ ಕಾರಣಗಳನ್ನು ಅನುಬಂಧದಲ್ಲಿ ಒದಗಿಸಲಾಗಿದೆ.<br>• ಭದ್ರಾ ಮೇಲ್ದಂಡೆ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಘೋಷಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದ್ದು, 2022-23ನೇ ಸಾಲಿನ ಕೇಂದ್ರ ಆಯವ್ಯಯದಲ್ಲಿ ರೂ. 5300 ಕೋಟಿ ಅನುದಾನವನ್ನು ಘೋಷಿಸಲಾಗಿದೆ. ಅದರಂತೆ ಸದರಿ ಅನುದಾನವನ್ನು National Project / Accelerated Irrigation Benefit Programme ಯೋಜನೆಯಡಿ ಶೀಘ್ರವಾಗಿ ಬಿಡುಗಡೆ ಮಾಡುವಂತೆ ಇತ್ತೀಚಿನ ದಿನಾಂಕ:20.12.2023ರ ಪತ್ರವೂ ಒಳಗೊಂಡಂತೆ ಹಲವಾರು ಬಾರಿ ಕೇಂದ್ರ ಸರ್ಕಾರವನ್ನು ಕೋರಲಾಗಿದೆ. |

***ಸಂಖ್ಯೆ: ಜಸಂಇ 05 ಎನ್‌ಎಲ್‌ಎ 2024***

( ಡಿ. ಕೆ. ಶಿವಕುಮಾರ್ )
ಉಪ ಮುಖ್ಯಮಂತ್ರಿಗಳು